# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 127 ಗ್ರಾಪಂಕಾ 2016 (ಭಾಗ-I)

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:06-12-2017

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**
ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿಗಳು,

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಶ್ರೇಣಿ-I) ಮತ್ತು (ಶ್ರೇಣಿ-II) ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ನೇಮಕಾತಿ ಪ್ರಾಧಿಕಾರ ಮತ್ತು ದಂಡನೆಗಳನ್ನು ವಿಧಿಸಿರುವ ಪ್ರಾಧಿಕಾರ ನಿರ್ದಿಷ್ಟಪಡಿಸಿರುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ 62 ಸೇಇವಿ 2014 ದಿನಾಂಕ:03-10-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಶ್ರೇಣಿ-I) ಮತ್ತು (ಶ್ರೇಣಿ-II) ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಗಳಿಗೆ ನೇಮಕಾತಿ ಪ್ರಾಧಿಕಾರ ಮತ್ತು ದಂಡನೆಗಳನ್ನು ವಿಧಿಸಿರುವ ಪ್ರಾಧಿಕಾರ ನಿರ್ದಿಷ್ಟಪಡಿಸಲಾಗಿದ್ದು, (ಪ್ರತಿ ಲಗತ್ತಿಸಿದೆ) ಅದರಂತೆ ನೇಮಕಾತಿ ಮಾಡಲು ಮತ್ತು ದಂಡನೆಗಳನ್ನು ವಿಧಿಸಲು ಕ್ರಮವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಮತ್ತು ಪದನಿಮಿತ್ತ,
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು
2) ವಿಶೇಷ ಅಧಿಕಾರಿ, ಗಣಕಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರಿಗೆ ವೆಬ್‌ಸೈಟ್‌ನಲ್ಲಿ ಅಳವಡಿಸಲು ಕೋರಿದೆ.

RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ-IVA<br>Part-IVA | ಬೆಂಗಳೂರು, ಮಂಗಳವಾರ, ಅಕ್ಟೋಬರ್ ೩, ೨೦೧೭ (ಆಶ್ವಯುಜ ೧೧, ಶಕ ವರ್ಷ ೧೯೩೯)<br>Bengaluru, Tuesday, October 3, 2017 (Aashwayuja 11, Shaka Varsha 1939) | ನಂ. ೯೧೮<br>No. 918 |
|---|---|---|

ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

ಅಧಿಸೂಚನೆ

**ಸಂಖ್ಯೆ: ಸಿಆಸುಇ 62 ಸೇಇವಿ 2014, ಬೆಂಗಳೂರು, ದಿನಾಂಕ: 03-10-2017**

ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 04.02.2017ರ ಅಧಿಸೂಚನೆ ಸಂಖ್ಯೆ: ಸಿಆಸುಇ 62 ಸೇಇವಿ 2014 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ವಿಶೇಷ ರಾಜ್ಯಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 04.02.2017ರ ಕರ್ನಾಟಕ ವಿಶೇಷ ರಾಜ್ಯಪತ್ರದ ಭಾಗ-IVಎ ಸಂಖ್ಯೆ:143 ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978(1990 ರ ಕರ್ನಾಟಕ ಅಧಿನಿಯಮ 14) ರ 8ನೇ ಪ್ರಕರಣದೊಂದಿಗೆ ಓದಿಕೊಂಡಂತೆ ಹಾಗೂ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 04.02.2017ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು ಸದರಿ ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ/ ಸಲಹೆಗಳು ಸ್ವೀಕೃತವಾಗದಿರುವುದರಿಂದ;

ಈಗ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ, 14)ರ 8ನೇ ಪ್ರಕರಣದೊಂದಿಗೆ ಓದಿಕೊಂಡ 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

**ನಿಯಮಗಳು**

**1. ಶೀರ್ಷಿಕೆ ಮತ್ತು ಪ್ರಾರಂಭ:** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) (ತಿದ್ದುಪಡಿ) ನಿಯಮಗಳು, 2014, ಎಂದು ಕರೆಯತಕ್ಕದ್ದು.

(2) ಈ ನಿಯಮಗಳು ಅಧಿಕೃತ ರಾಜ್ಯ ಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ಅನುಸೂಚಿ II ಕ್ಕೆ ತಿದ್ದುಪಡಿ:** ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ಅನುಸೂಚಿ II ರಲ್ಲಿ "ಅಭಿವೃದ್ಧಿ ಇಲಾಖೆ" ಶೀರ್ಷಿಕೆಯಡಿ "ಪ್ಲಾಟ್ ಯೋಜನಾಧಿಕಾರಿ(ಕೈಗಾರಿಕೆಗಳು)" ಉಪ ಶೀರ್ಷಿಕೆಯಲ್ಲಿನ "ಗ್ರಾಮ ಪಂಚಾಯತ್ ಕಾರ್ಯದರ್ಶಿಗಳು ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕರು(ಶ್ರೇಣಿ-I) ಮತ್ತು (ಶ್ರೇಣಿ-II)" ವೃಂದಗಳಿಗೆ ಸಂಬಂಧಪಟ್ಟ ನಮೂದುಗಳ ಬದಲಾಗಿ ಈ ಕೆಳಗಿನವುಗಳನ್ನು ಪ್ರತಿಸ್ಥಾಪಿಸತಕ್ಕದ್ದು, ಎಂದರೆ:-

| ಹುದ್ದೆಗಳ ವರ್ಗ | ನೇಮಕ ಮಾಡುವ ಅಧಿಕಾರವುಳ್ಳ ಪ್ರಾಧಿಕಾರಿ | ದಂಡನೆಗಳನ್ನು ವಿಧಿಸುವ ಅಧಿಕಾರವುಳ್ಳ ಪ್ರಾಧಿಕಾರ ಮತ್ತು ಅವರು ವಿಧಿಸಬಹುದಾದ ದಂಡನೆಗಳು | | ಮೇಲ್ಮನವಿ ಪ್ರಾಧಿಕಾರ |
|---|---|---|---|---|
| | | ಪ್ರಾಧಿಕಾರಿ | ದಂಡನೆಗಳು | |
| (1) | (2) | (3) | (4) | (5) |
| ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಶ್ರೇಣಿ-I) | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ | ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ | (ii)ರಿಂದ (iva) | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ |
| | | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ | (v) ರಿಂದ (viii) | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ |
| ಗ್ರಾಮ ಪಂಚಾಯತ್ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಶ್ರೇಣಿ-II) | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ | ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ | (ii)ರಿಂದ (iva) | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ |
| | | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ | (v) ರಿಂದ (viii) | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ |
| ದ್ವಿತೀಯ ದರ್ಜೆ ಲೆಕ್ಕ ಸಹಾಯಕ | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ | ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ | (ii)ರಿಂದ (iva) | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ |
| | | ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ | (v) ರಿಂದ (viii) | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಗಾಯತ್ರಿ ಎಂ.ಆರ್**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

**PERSONNEL AND ADMINISTRATIVE REFORMS SECRETARIAT**

**NOTIFICATION**

**NO: DPAR 62 SDE 2014, Bengaluru, dated: 03.10.2017**

Whereas the draft of the Karnataka Civil Services (Classification, Control and Appeal) (Amendment) Rules, 2017, was published as required by clause (a) of sub section (2) Section 3 read with Section 8 of the Karnataka State Civil Services Act, 1978 ( Karnataka Act 14 of 1990) in Notification No. DPAR 62 SDE 2014, dated 04th February 2017 in part IV A No:143 of the Karnataka Gazette Extra -ordinary dated: 4th February 2017 inviting objections and Suggestions from all persons likely to be affected thereby within fifteen days from the date of publication of the draft in the Official Gazette.

Whereas, the said Gazette was made available to the public on 4th February, 2017;

And whereas no objections and suggestions have been received in this behalf by the State Government.

Now, therefore, in exercise of the powers conferred by sub-section (1) of Section 3 read with Section 8 of the Karnataka State Civil Services Act, 1978 (Karnataka Act 14 of 1990) the Government of Karnataka hereby makes the following rules, namely;

**RULES**

1. **Title and commencement:-** (1) These rules may be called the Karnataka Civil Services (Classification, Control and Appeal) (Amendment) Rules, 2014.

(2) They shall come into force from the date of their publication in the official Gazette.

2. **Amendment of Schedule II:-** In the Karnataka Civil Services (Classification, Control and Appeal) Rules, 1957, in Schedule II, under the heading "DEVELOPMENT DEPARTMENT", under the sub-heading "Plot Project Officer(Industries) for the entries relating to the cadres of "Grama Panchayat Secretaries and Rural Development Assistants(Grade-I) and (Grade-II)", the following shall be substituted, namely:-

| Class of Posts | Authority empowered to appoint | Authority empowered to impose penalties and penalties which he may impose | | Appellate Authority |
|---|---|---|---|---|
| | | Authority | Penalties | |
| (1) | (2) | (3) | (4) | (5) |
| Grama Panchayat Secretary and Rural Development Assistant (Grade-I) | Deputy Secretary (Development), Zilla Panchayat | Executive Officer, Taluka Panchayat | (ii) to (iva) | Deputy Secretary (Development), Zilla Panchayat |
| | | Deputy Secretary (Development), Zilla Panchayat | (v) to (viii) | Chief Executive Officer, Zilla Panchayat |
| Grama Panchayat Secretary and Rural Development Assistant (Grade-II) | Deputy Secretary (Development), Zilla Panchayat | Executive Officer, Taluka Panchayat | (ii) to (iva) | Deputy Secretary (Development), Zilla Panchayat |
| | | Deputy Secretary (Development), Zilla Panchayat | (v) to (viii) | Chief Executive Officer, Zilla Panchayat |
| Second Division Accounts Assistant | Deputy Secretary (Development), zilla Panchayat | Executive Officer, Taluka Panchayat | (ii) to (iva) | Deputy Secretary (Development), Zilla Panchayat |
| | | Deputy Secretary (Development), Zilla Panchayat | (v) to (viii) | Chief Executive Officer, Zilla Panchayat |

By Order and in the name of the Governor of Karnataka

**Gayathri M.R**
Under Secretary to Government
Department of Personnel and
Administrative Reforms (Service Rules-1)

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 600